Akashvani : Bangalore
National Bulletin In Kannada
21.02.2025 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ನವದೆಹಲಿಯಲ್ಲಿ ಇಂದು ಸೋಲ್ ನಾಯಕತ್ವ ಶೃಂಗಸಭೆಯ ಮೊದಲ ಆವೃತ್ತಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
- ಜಿ-೨೦ ವಿದೇಶಾಂಗ ಸಚಿವರ ಸಭೆ; ಚೀನಾ ವಿದೇಶಾಂಗ ಸಚಿವರೊಂದಿಗೆ ಡಾ.ಎಸ್.ಜೈಶಂಕರ್ ಮಾತುಕತೆ
- ಮುಂಬೈನಲ್ಲಿ ಮೇ ೧ ರಿಂದ ವೇವ್ಸ್ -೨೦೨೫
- ಮಹಾಕುಂಭ ಮೇಳದಲ್ಲಿ ಕಾರ್ಮಿಕರ ಮಕ್ಕಳ ಉಚಿತ ಶಿಕ್ಷಣಕ್ಕಾಗಿ 'ವಿದ್ಯಾಕುಂಭ' ಸಂಚಾರಿ ಶಾಲೆ
- ಡಬ್ಲ್ಯು ಪಿಎಲ್ ಕ್ರಿಕೆಟ್ ; ರಾಯಲ್ ಚಾಲೆಂಜರ್ಸ್ ಬೆಂಗಳೂರು- ಮುಂಬೈ ಮುಖಾಮುಖಿ

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ನವದೆಹಲಿಯ ಭಾರತ ಮಂಟಪದಲ್ಲಿಂದು ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್-ಸೋಲ್ ನಾಯಕತ್ವ ಶೃಂಗಸಭೆಯ ಮೊದಲ ಆವೃತ್ತಿಯನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಇಂದು ದೇಶದ ಪ್ರತಿಯೊಬ್ಬ ವ್ಯಕ್ತಿಯು ವಿಕಸಿತ ಭಾರತ ಗುರಿ ಸಾಧನೆ ನಿಟ್ಟಿನಲ್ಲಿ ಶ್ರಮವಹಿಸಿ ದುಡಿಯುತ್ತಿದ್ದಾರೆ. ೨೧ನೇ ಶತಮಾನಕ್ಕೆ ಅಗತ್ಯವಾದ ಉತ್ಕೃಷ್ಟ ನಾಯಕತ್ವ ಬೆಳೆಸಲು ವಿಫುಲ ಅವಕಾಶವಿದೆ. ಈ ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್‌ನಿಂದ ಶ್ರೇಷ್ಠ ನಾಯಕರು ಹೊರ ಹೊಮ್ಮುವ ವಿಶ್ವಾಸವಿದೆ ಎಂದು ಹೇಳಿದರು. ಭಾರತ ಜಾಗತಿಕ ಶಕ್ತಿ ಕೇಂದ್ರವಾಗಿ ಬದಲಾಗುತ್ತಿದ್ದು, ಪ್ರತಿಯೊಂದು ವಲಯದಲ್ಲೂ ಬಲಿಷ್ಠ ನಾಯಕರ ಅಗತ್ಯವಿದೆ. ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸಲು ವಿಶ್ವದರ್ಜೆಯ ನಾಯಕರು ಮತ್ತು ಅಂತಾರಾಷ್ಟ್ರೀಯ ನಾಯಕತ್ವ ಅಗತ್ಯವಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ಮುಖ್ಯ ಅತಿಥಿಯಾಗಿ ಭಾಗವಹಿಸಿದ ಭೂತಾನ್ ಪ್ರಧಾನಿ ದಾಶೋ ಶೆರಿಂಗ್ ಟೊಬ್ಗೇ ಮಾತನಾಡಿ, ಎರಡು ದಿನಗಳ ಸೋಲ್ ನಾಯಕತ್ವ ಶೃಂಗಸಭೆ ಒಂದು ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ೯೮ನೇ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿದರು. ಮೂರು ದಿನಗಳ ಸಮ್ಮೇಳನವು ವೈವಿಧ್ಯಮಯ ಚರ್ಚೆಗಳು, ಪುಸ್ತಕ ಪ್ರದರ್ಶನಗಳು, ಸಾಂಸ್ಕೃತಿಕ ಪ್ರದರ್ಶನ ಮತ್ತು ಹೆಸರಾಂತ ಸಾಹಿತಿಗಳೊಂದಿಗೆ ಸಂವಾದಾತ್ಮಕ ಗೋಷ್ಠಿಗಳನ್ನು ಒಳಗೊಂಡಿದೆ. ಮರಾಠಿ ಭಾಷೆಗೆ ಕೇಂದ್ರ ಸರ್ಕಾರ ಇತ್ತೀಚೆಗೆ ಶಾಸ್ತ್ರೀಯ ಭಾಷಾ ಸ್ಥಾನಮಾನವನ್ನು ನೀಡಿತು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೨೩ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಲಹೆ ಹಾಗೂ ಅಭಿಪ್ರಾಯಗಳನ್ನು ಕಳುಹಿಸಲು ಇಂದು ಕೊನೆಯ ದಿನವಾಗಿದೆ. ಆಸಕ್ತರು ಒಥಿ ಉov.iಟಿ ವೇದಿಕೆ ಮೂಲಕ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

<><*<><>*><>

ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ನಡೆಯುತ್ತಿರುವ ಜಿ-೨೦ ವಿದೇಶಾಂಗ ಸಚಿವರ ಸಭೆಯ ವೇಳೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್, ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ಇಂದು ಮಾತುಕತೆ ನಡೆಸಿದರು. ಈ ವೇಳೆ ಜಾಗತಿಕ ವಿದ್ಯಮಾನಗಳು, ಗಡಿ ವಿಷಯ ಸೇರಿದಂತೆ ಅನೇಕ ವಿಷಯಗಳನ್ನು ಚರ್ಚಿಸಲಾಯಿತು. ಈ ಕುರಿತು ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ಚೀನಾ ನಡುವಿನ ದ್ವಿಪಕ್ಷೀಯ ಸಂಬಂಧದಲ್ಲಿನ ಬೆಳವಣಿಗೆಗಳನ್ನು, ವಿಶೇಷವಾಗಿ ಗಡಿ ಪ್ರದೇಶಗಳಲ್ಲಿ ಶಾಂತಿಯ ವಾತಾವರಣ ಮುಂದುವರಿಸುವ ನಿಟ್ಟಿನಲ್ಲಿ ಉಭಯ ನಾಯಕರು ಮಾತುಕತೆ ನಡೆಸಿದರು. ಕೈಲಾಸ ಮಾನಸ ಸರೋವರ ಯಾತ್ರೆ, ನೇರ ವಿಮಾನ ಸಂಪರ್ಕ ಪುನರಾರಂಭ ಮತ್ತು ಪ್ರಯಾಣ ಸೌಲಭ್ಯದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು ಎಂದು ತಿಳಿಸಿದರು.

ಧ್ವನಿ: ರಣಧೀರ್ ಜೈಸ್ವಾಲ್

ಇದಕ್ಕೂ ಮುನ್ನ ಡಾ. ಎಸ್.ಜೈಶಂಕರ್, ರಷ್ಯಾ ವಿದೇಶಾಂಗ ಸಚಿವ ಸರ್ಗೆ ಲಾವ್ ರೋವ್ ಅವರನ್ನು ಭೇಟಿ ಮಾಡಿ, ಭಾರತ-ರಷ್ಯಾ ದ್ವಿಪಕ್ಷೀಯ ಸಹಕಾರ ಪ್ರಗತಿ ಕುರಿತು ಪರಿಶೀಲಿಸಿದರು. ಅಲ್ಲದೆ, ಉಕ್ರೇನ್ ಸಂಘರ್ಷಕ್ಕೆ ಸಂಬಂಧಿಸಿ ಇತ್ತೀಚಿನ ಬೆಳವಣಿಗೆಗಳ ಬಗ್ಗೆಯೂ ಉಭಯ ನಾಯಕರು ಸಮಾಲೋಚಿಸಿದರು.

<><*<><>*><>

ವಿಶ್ವ ಧ್ವನಿ-ದೃಶ್ಯ ಮನರಂಜನಾ ಸಮ್ಮೇಳನ 'ವೇವ್ಸ್ ೨೦೨೫' ಮೇ ೧ ರಿಂದ ೪ ರವರಗೆ ಮುಂಬೈನಲ್ಲಿ ನಡೆಯಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯ ತಿಳಿಸಿದೆ. ವೇವ್ಸ್ ಶೃಂಗಸಭೆಯು ಭಾರತವನ್ನು ಜಾಗತಿಕ ಮಾಧ್ಯಮ ಮತ್ತು ಮನರಂಜನಾ ಕೇಂದ್ರವಾಗಿ ಸ್ಥಾಪಿಸುವ ಪ್ರಮುಖ ಉಪಕ್ರಮ ಇದಾಗಿದ್ದು, ಮಾಧ್ಯಮ ಸಿಇಒ ಗಳು, ಮನರಂಜನಾ ವೃತ್ತಿಪರರು ಮತ್ತು ಸೃಜನಶೀಲ ಮನಸ್ಸುಗಳು ಸೇರಿದಂತೆ ಪ್ರಮುಖ ಉದ್ಯಮ ವ್ಯಕ್ತಿಗಳನ್ನು ಒಟ್ಟುಗೂಡಿಸುತ್ತದೆ. ಜಾಗತಿಕ ಮನರಂಜನಾ ವಲಯದಲ್ಲಿ ಸಹಯೋಗ, ಹೂಡಿಕೆ ಮತ್ತು ತಾಂತ್ರಿಕ ಪ್ರಗತಿಯನ್ನು ಬೆಳೆಸುವ ಗುರಿಯನ್ನು ವೇವ್ಸ್ ಶೃಂಗಸಭೆ ಹೊಂದಿದೆ. ಇದು ಅನಿಮೇಷನ್, ಗೇಮಿಂಗ್ ಮತ್ತು ಚಲನಚಿತ್ರ ನಿರ್ಮಾಣದಲ್ಲಿನ ಪ್ರಗತಿಯ ಮೇಲೆ ಕೇಂದ್ರೀಕರಿಸುತ್ತದೆ. ಇದು ಭಾರತೀಯ ಮತ್ತು ಅಂತಾರಾಷ್ಟ್ರೀಯ ಉದ್ಯಮಿಗಳಿಗೆ ಭವಿಷ್ಯದ ಪ್ರವೃತ್ತಿಗಳ ಕುರಿತು ಚರ್ಚಿಸಲು ಮತ್ತು ಹೂಡಿಕೆ ಅವಕಾಶಗಳನ್ನು ಅನ್ವೇಷಿಸಲು ಅವಕಾಶವನ್ನು ಒದಗಿಸುತ್ತದೆ. ಮನರಂಜನಾ ತಂತ್ರಜ್ಞಾನದಲ್ಲಿ ದೇಶವನ್ನು ನಾಯಕನನ್ನಾಗಿ ಮಾಡುವಲ್ಲಿ ವೇವ್ಸ್ ಶೃಂಗಸಭೆಯು ಪ್ರಮುಖ ಪಾತ್ರ ವಹಿಸುವ ನಿರೀಕ್ಷೆಯಿದೆ.

<><*<><>*><>

ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ನೇತೃತ್ವದ ಸುಪ್ರೀಂ ಕೋರ್ಟ್ ಕೊಲಿಜಿಯಂ, ಬಾಂಬೆ ಹೈಕೋರ್ಟ್‌ನಲ್ಲಿ ಮೂವರು ಹೆಚ್ಚುವರಿ ನ್ಯಾಯಾಧೀಶರನ್ನು ಖಾಯಂ ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಗೆ ಅನುಮೋದನೆ ನೀಡಿದೆ. ನ್ಯಾಯಮೂರ್ತಿಗಳಾದ ಶೈಲೇಶ್ ಪ್ರಮೋದ್ ಬ್ರಾಹ್ಮೆ, ಫಿರ್ದೋಷ್ ಫಿರೋಜ್ ಪೂನಿವಾಲ್ಲಾ ಮತ್ತು ಜಿತೇಂದ್ರ ಶಾಂತಿಲಾಲ್ ಜೈನ್ ಅವರ ಹೆಸರನ್ನು ಕೊಲಿಜಿಯಂ ಅನುಮೋದಿಸಿದೆ. ಇದೇ ವೇಳೆ ಬಾಂಬೆ ಹೈಕೋರ್ಟ್‌ನಲ್ಲಿ ಹೆಚ್ಚುವರಿ ಹೈಕೋರ್ಟ್ ನ್ಯಾಯಾಧೀಶರಾದ ನ್ಯಾಯಮೂರ್ತಿ ಮಂಜುಷಾ ಅಜಯ್ ದೇಶಪಾಂಡೆ ಅವರ ಅವಧಿಯನ್ನು ಒಂದು ವರ್ಷದವರೆಗೆ ವಿಸ್ತರಿಸಬೇಕೆಂದು ಸಹ ಶಿಫಾರಸು ಮಾಡಿದೆ. ಮದ್ರಾಸ್ ಹೈಕೋರ್ಟ್‌ನಲ್ಲಿ ಐದು ಹೆಚ್ಚುವರಿ ನ್ಯಾಯಾಧೀಶರನ್ನು ಖಾಯಂ ನ್ಯಾಯಾಧೀಶರನ್ನಾಗಿ ನೇಮಿಸುವ ಪ್ರಸ್ತಾವನೆಗೆ ಕೊಲಿಜಿಯಂ ಅನುಮೋದನೆ ನೀಡಿದೆ. ಶಿಫಾರಸು ಮಾಡಿದವರಲ್ಲಿ ನ್ಯಾಯಮೂರ್ತಿಗಳಾದ ರಾಮಸಾಮಿ ಶಕ್ತಿವೇಲ್, ಪಿ.ಧನಬಾಲ್, ಚಿನ್ನಸಾಮಿ ಕುಮಾರಪ್ಪನ್ ಮತ್ತು ಕಂದಸಾಮಿ ರಾಜಶೇಖರ್ ಸೇರಿದ್ದಾರೆ.

<><*<><>*><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭಮೇಳದಲ್ಲಿ, ಭಕ್ತಿ, ಶ್ರದ್ಧೆ ಮತ್ತು ಆಧ್ಯಾತ್ಮಿಕತೆಯ ಜೊತೆಗೆ ಶಿಕ್ಷಣಕ್ಕೂ ಒತ್ತು ನೀಡಲಾಗುತ್ತಿದೆ. ಉತ್ತರ ಪದೇಶ ಸರ್ಕಾರದ ಉಪಕ್ರಮದ ಭಾಗವಾಗಿ, 'ವಿದ್ಯಾ ಕುಂಭ' ಹೆಸರಿನ ಶಾಲೆಗಳನ್ನು ಮಹಾಕುಂಭ ಪ್ರದೇಶದ ಪ್ರತಿಯೊಂದು ವಲಯದಲ್ಲಿ ಸ್ಥಾಪಿಸಲಾಗಿದೆ. ಐದನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣದ ಜೊತೆಗೆ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. ದೇಶದ ನಾನಾ ಭಾಗಗಳಿಂದ ಮಹಾಕುಂಭದಲ್ಲಿ ಕೆಲಸ ಮಾಡಲು ಬಂದಿರುವ ಕಾರ್ಮಿಕರ ಮಕ್ಕಳು ವಿದ್ಯಾಕುಂಭದಲ್ಲಿ ಓದುತ್ತಾರೆ. ಈ ಸಂಚಾರಿ ಶಾಲೆಗಳ ಮೂಲಕ ಮಕ್ಕಳಿಗೆ ಮಹಾಕುಂಭದ ಸಂದರ್ಭದಲ್ಲಿ ಅವರ ಶೈಕ್ಷಣಿಕ ಬೆಳವಣಿಗೆಗೆ ಯಾವುದೇ ರಾಜೀ ಇಲ್ಲದೆ, ಶಿಕ್ಷಣ ನೀಡಲಾಗುತ್ತಿದೆ. ಬ್ಯಾಗ್‌ಗಳು, ಉಡುಪುಗಳು, ಶೂಗಳ ಜೊತೆಗೆ ಅಗತ್ಯವಾದ ಲೇಖನ ಸಾಮಗ್ರಿಗಳನ್ನು ವಿದ್ಯಾರ್ಥಿಗಳಿಗೆ ಉಚಿತವಾಗಿ ನೀಡಲಾಗುತ್ತಿದೆ. ಈ ಶಾಲೆಗಳಲ್ಲಿ ಸ್ಮಾರ್ಟ್ ತರಗತಿಗಳು ಇವೆ. ವಿದ್ಯಾಕುಂಭವು ಮಕ್ಕಳಿಗೆ ಶಿಕ್ಷಣದ ಜೊತೆಗೆ ಮಹಾಕುಂಭ ಮೇಳದಲ್ಲಿ ಸುರಕ್ಷತೆಗಳನ್ನು ಖಾತ್ರಿಗೊಳಿಸುತ್ತದೆ. ಇದರಿಂದ ಪೋಷಕರು ಆತಂಕವಿಲ್ಲದೆ ಕೆಲಸಕ್ಕೆ ಹೋಗಬಹುದು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ, ಭಾರತದ ಕೃಷಿ ರಫ್ತು ಅಭೂತಪೂರ್ವ ವಿಸ್ತರಣೆ ಕಂಡಿದೆ. ಅನೇಕ ಉತ್ಪನ್ನಗಳು ಮೊದಲ ಬಾರಿಗೆ ಅಂತಾರಾಷ್ಟ್ರೀಯ ಮಾರುಕಟ್ಟೆಗಳಿಗೆ ಪ್ರವೇಶಿಸುತ್ತಿವೆ. ಇದು ವ್ಯಾಪಾರದ ಜೊತೆಗೆ ರೈತರನ್ನು ಸಬಲೀಕರಣಗೊಳಿಸುತ್ತದೆ, ಗ್ರಾಮೀಣ ಆದಾಯವನ್ನು ಹೆಚ್ಚಿಸುತ್ತದೆ ಮತ್ತು ಭಾರತದ ಶ್ರೀಮಂತ ಕೃಷಿ ಪರಂಪರೆಯನ್ನು ಜಾಗತಿಕ ನಕ್ಷೆಯಲ್ಲಿ ಸ್ಥಾಪಿಸುತ್ತದೆ. ದೇಶೀ ಮತ್ತು ವಿದೇಶೀ ಹಣ್ಣುಗಳಿಂದ ಹಿಡಿದು ಸಾಂಪ್ರದಾಯಿಕ ಆಹಾರ ಪದಾರ್ಥಗಳವರೆಗೆ ಕೃಷಿ ರಫ್ತು, ಆತ್ಮನಿರ್ಭರ ಭಾರತಕ್ಕಾಗಿ ಕೇಂದ್ರ ಸರ್ಕಾರದ ದೃಷ್ಟಿಕೋನವು ರೈತರಿಗೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿದೆ. ಭಾರತದ ವಿಶಿಷ್ಟ ಜಿಐ-ಟ್ಯಾಗ್ ಹೊಂದಿದ ಪುರಂದರ ಅಂಜೂರದ ಹಣ್ಣುಗಳು ಈಗ ಯುರೋಪಿನಲ್ಲಿ ಹೊಸ ಅಲೆಯನ್ನು ಸೃಷ್ಟಿಸುತ್ತಿವೆ. ೨೦೨೪ರಲ್ಲಿ, ಅಂಜೂರದ ರಸವನ್ನು ಪೋಲೆಂಡಿಗೆ ರಫ್ತು ಆರಂಭಿಸಲಾಯಿತು. ಇದಕ್ಕೂ ಮೊದಲು ೨೦೨೨ ರಲ್ಲಿ, ಜರ್ಮನಿಗೂ ರಫ್ತು ಮಾಡಲಾಯಿತು. ಈ ರೀತಿ ದೇಶದ ಅನೇಕ ಕೃಷಿ ಉತ್ಪನ್ನಗಳ ರಫ್ತು, ಜಾಗತಿಕ ವೇದಿಕೆಯಲ್ಲಿ ಭಾರತದ ವಿಶಿಷ್ಟ ಕೃಷಿ ಉತ್ಪನ್ನಗಳನ್ನು ಉತ್ತೇಜಿಸುವಲ್ಲಿ ಮಹತ್ವದ ಸಾಧನೆಯಾಗಿದೆ.

<><*<><>*><>

ಭಾರತವು ಟೆಲಿಕಾಂ, ಕೃತಕ ಬುದ್ಧಿಮತ್ತೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಪ್ರಮುಖ ಕ್ಷೇತ್ರಗಳಲ್ಲಿ ಬ್ರಿಟನ್‌ನೊಂದಿಗೆ ತನ್ನ ಸಹಯೋಗವನ್ನು ವಿಸ್ತರಿಸಿದೆ. ಟೆಲಿಕಾಂ ಕಾರ್ಯದರ್ಶಿ ಡಾ.

ನೀರಜ್ ಮಿತ್ತಲ್ ಅವರು ಬ್ರಿಟನ್‌ಗೆ ಭೇಟಿ ನೀಡಿದ್ದು, ಈ ವೇಳೆ ಬ್ರಿಟನ್‌ನ ರಾಷ್ಟ್ರೀಯ ವೈಜ್ಞಾನಿಕ ಸಲಹೆಗಾರ ಕ್ರಿಸ್ ಜಾನ್ಸನ್ ಅವರೊಂದಿಗೆ ಮಾತುಕತೆ ನಡೆಸಿದರು.

<><*<><>*><>

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೯ನೇ ಕಂತನ್ನು ಪ್ರಧಾನಿ ನರೇಂದ್ರ ಮೋದಿ ಇದೇ ಸೋಮವಾರ ಬಿಹಾರದ ಭಾಗಲ್ಪುರದಲ್ಲಿ ಬಿಡುಗಡೆ ಮಾಡಲಿದ್ದಾರೆ. ಈ ಯೋಜನೆಯು ಭೂಮಿ ಹೊಂದಿರುವ ರೈತರಿಗೆ ವಾರ್ಷಿಕ ಆರು ಸಾವಿರ ರೂಪಾಯಿಗಳನ್ನು ಮೂರು ಸಮಾನ ಕಂತುಗಳಲ್ಲಿ ಒದಗಿಸುತ್ತದೆ.

<><*<><>*><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳೆಯರ ಪ್ರೀಮಿಯರ್ ಲೀಗ್-ಡಬ್ಲೂಪಿಎಲ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ಆರ್‌ಸಿಬಿ ೧ ಓವರ್‌ಗೆ ವಿಕೆಟ್ ನಷ್ಟವಿಲ್ಲದೆ ೩೩ ಗಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>